## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಅಬ್ದುಲ್‌ಜಬ್ಬಾರ್‌ಇವರು ನಿಯಮ 330ರಡಿ ಮಂಡಿಸಿರುವ ಸೂಚನಾ ಪತ್ರಕ್ಕೆಉತ್ತರ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (BBMP) ವ್ಯಾಪ್ತಿಯಲ್ಲಿ ಚಿಲುಮೆ ಸಂಸ್ಥೆಯಿಂದ ಮತದಾರರ ಮಾಹಿತಿ ದುರುಪಯೋಗ, ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲಿ 90 ಸಾವಿರ ಮತದಾರರ ಮಾಹಿತಿಯನ್ನು ಸಂಗ್ರಹಿಸಿ ಮುಂಬರುವ ವಿಧಾನಸಭಾ ಚುನಾವಣೆ ವೇಳೆ ಆಯಾ ಕ್ಷೇತ್ರಗಳ-ಮತದಾರರ ದತ್ತಾಂಶವನ್ನು ರಾಜಕೀಯ ಪಕ್ಷಗಳಿಗೆ ಮಾರಾಟ ಮಾಡಿ ಹಣ ಸಂಪಾದಿಸುವುದು ಚಿಲುಮೆ ಸಂಸ್ಥೆಯ ಮುಖ್ಯಸ್ಥರ ತಂಡದ ದುರಾಲೋಚನೆ ಕುರಿತ ಸ್ಫೋಟಕ ಮಾಹಿತಿಯು ಬೆಳಕಿಗೆ ಬಂದಿರುವ ಬಗ್ಗೆ ಹಾಗೂ ರಾಜ್ಯದ ಇತರೇ ಭಾಗಗಳಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಹೆಸರಿನಲ್ಲಿ ವ್ಯಾಪಕ ಅಕ್ರಮ ಎಸಗುವ ಮೂಲಕ ಮತದಾರರ ಹೆಸರು ಡಿಲೀಟ್ ಆಗಿರುವ ವಿಶೇಷವಾಗಿ ಅಲ್ಪಸಂಖ್ಯಾತರು, ಹಿಂದುಳಿದ ವರ್ಗಕ್ಕೆ ಸೇರಿದ ಮತದಾರರ ಹೆಸರುಗಳನ್ನು ಅಕ್ರಮವಾಗಿ ಡಿಲೀಟ್ ಮಾಡಿರುವ ಗಂಭೀರ ಪ್ರಕರಣ ಕುರಿತು ಸನ್ಮಾನ್ಯ ಮುಖ್ಯಮಂತ್ರಿಗಳಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

---

**ಉತ್ತರ**

ದಿನಾಂಕ: 21-11-2022ರಂದು ಮಾನ್ಯ ಮುಖ್ಯ ಚುನಾವಣಾಧಿಕಾರಿ ಕರ್ನಾಟಕರವರು ಪತ್ರಿಕಾ ಪ್ರಕಟಣೆಯನ್ನು ನೀಡಿ, ಭಾರತ ಚುನಾವಣಾ ಆಯೋಗವು ಶಾಸನ ಬದ್ಧ ಸ್ವತಂತ್ರ ಸಂಸ್ಥೆಯಾಗಿರುತ್ತದೆ. ವಿಧಾನ ಸಭಾ ಕ್ಷೇತ್ರಗಳ ಮತದಾರರ ನೊಂದಣಾಧಿಕಾರಿಗಳು, ಮತದಾರರ ಪಟ್ಟಿಯ ಸಿದ್ದಪಡಿಸುವ, ಪ್ರಕಟಿಸುವ ಮತ್ತು ಪರಿಷ್ಕರಿಸುವ ಕಾರ್ಯಗಳನ್ನು ಪ್ರಜಾಪ್ರತಿನಿಧಿ ಕಾಯ್ದೆ-1950, ಮತದಾರರ ನೊಂದಣಿ ನಿಯಮಗಳು 1960 ಮತ್ತು ಕಾಲದಿಂದ ಕಾಲಕ್ಕೆ ಭಾರತ ಚುನಾವಣಾ ಆಯೋಗವು ನೀಡುವ ಸೂಚನೆಗಳ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಾರೆ. ಈ ಎಲ್ಲ ಕಾರ್ಯ ಚಟುವಟಿಕೆಗಳು ಭಾರತ ಚುನಾವಣಾ ಆಯೋಗದ ಮೇಲುಸ್ತುವಾರಿ, ನಿರ್ದೇಶನಗಳು ಮತ್ತು ನಿಯಂತ್ರಣದಲ್ಲಿ ನಡೆಯುತ್ತದೆ.

ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಪಾದನೆಗಳು, ಅಕ್ರಮ ಪ್ರಕರಣಗಳನ್ನು ತನಿಖೆ ಮಾಡಿಸಲು ಭಾರತ ಚುನಾವಣಾ ಆಯೋಗವು ಏಕೈಕ ಪ್ರಾಧಿಕಾರವಾಗಿರುತ್ತದೆ. ಸದರಿ ಪ್ರಕರಣದ ಕುರಿತು ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗರವರು ವಿಚಾರಣೆ ನಡೆಸುತ್ತಿದ್ದಾರೆ. ಮುಂದುವರೆದು, ಈ ಕುರಿತು ದಾಖಲಿಸಿರುವ ಎರಡು ಎಫ್.ಐ.ಆರ್ ಗಳ ಕುರಿತು ಪೊಲೀಸ್ ತನಿಖೆ ಪ್ರಗತಿಯಲ್ಲಿದೆ, ಈ ವಿಷಯವಾಗಿ ಈವರೆಗೆ ಚಿಲುಮೆ ಸಂಸ್ಥೆಗೆ ಸಂಬಂಧಿಸಿದ 09 ಜನರನ್ನು ಹಾಗೂ 04 ಕಂದಾಯ ಅಧಿಕಾರಿಗಳನ್ನು ಒಟ್ಟು 13 ಆರೋಪಿಗಳನ್ನು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುವುದಾಗಿ ಹಾಗೂ ಆರೋಪಿಗಳಿಂದ ಒಟ್ಟು 10 ಮೊಬೈಲ್ ಫೋನ್‌ಗಳನ್ನು, 04 ಲ್ಯಾಪ್‌ಟಾಪ್‌ಗಳನ್ನು ಹಾಗೂ 08 ಕಂಪ್ಯೂಟರ್ ಉಪಕರಣಗಳನ್ನು ಅಮಾನತ್ತು ಪಡಿಸಿಕೊಂಡಿರುವ ವಿಷಯವು ಸಾರ್ವಜನಿಕಗೊಂಡಿರುತ್ತದೆ ಈ ವಿಷಯದಲ್ಲಿ ಭಾರತ ಚುನಾವಣಾ ಆಯೋಗವು ಸೂಕ್ತ ಕ್ರಮಕೈಗೊಳ್ಳುವ ಸಕ್ಷಮ ಪ್ರಾಧಿಕಾರವಾಗಿರುತ್ತದೆ.

**ಸಂಖ್ಯೆ: ನಅಇ 220 ಬಿಬಿಎಸ್ 2022(ಇ)**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ